# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)/2018/2656

ನಿರ್ದೇಶಕರವರ ಕಛೇರಿ.
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 01/01/2019.

## ಹಿಂಬರಹ

ಕರ್ನಾಟಕ ಸರ್ಕಾರದ ನಡವಳಿಗಳು: ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಆಇ 10 ಸೇನಿಸೇ 2018 ಬೆಂಗಳೂರು ದಿನಾಂಕ:19/12/2018ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳ್ಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್‌ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ ಕೆ.ಜಿ.ಎಫ್.ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

15494

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2019ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ನಿಯತಗೊಳಿಸುವ ಬಗ್ಗೆ.

**ಓದಲಾಗಿದೆ:** ಸರ್ಕಾರಿ ಅದೇಶ ಸಂಖ್ಯೆ: ಆಇ 5 ಸೇನಿಸೇ 2012 ದಿನಾಂಕ: 14.06.2012.

**ಪ್ರಸ್ತಾವನೆ:**

ಮೇಲೆ ಓದಲಾದ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 118(2)ರ ಸೌಲಭ್ಯ ಪಡೆಯುವ ಸಲುವಾಗಿ, ಪ್ರತೀ ಕ್ಯಾಲೆಂಡರ್ ವರ್ಷದಲ್ಲಿ (ಆಯಾ ವರ್ಷದ ಜನವರಿ 1ರಿಂದ ಡಿಸೆಂಬರ್ 31ರ ಒಳಗೆ) 15 ದಿನಗಳಿಗೆ ಮೀರದ ಗಳಿಕೆ ರಜೆಯನ್ನು ಅಧ್ಯರ್ಪಿಸಿ, ರಜಾ ವೇತನಕ್ಕೆ ಸಮನಾದ ನಗದೀಕರಣ ಪಡೆಯಬಹುದಾದ ಸೌಲಭ್ಯವನ್ನು ದಿನಾಂಕ: 01.01.2013ರಿಂದ ಜಾರಿಗೊಳಿಸಲಾಗಿದೆ.

2019ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ನಿಯತಗೊಳಿಸುವುದು ಅವಶ್ಯಕವೆಂದು ಸರ್ಕಾರವು ಈ ಬಗ್ಗೆ ಪರಿಶೀಲಿಸಿ ಕೆಳಗಿನಂತೆ ಆದೇಶಿಸಿದೆ.

EST(9)/EST(6),(3),(10),15

**ಸರ್ಕಾರಿ ಆದೇಶ ಸಂಖ್ಯೆ: ಆಇ 10 ಸೇನಿಸೇ 2018 ಬೆಂಗಳೂರು, ದಿನಾಂಕ:19.12.2018**

2019ನೇ ಸಾಲಿನ ಅವಧಿಗೆ ಗರಿಷ್ಠ 15 ದಿನಗಳಿಗೆ ಮೀರದ ಗಳಿಕೆ ರಜೆಯನ್ನು ಅಧ್ಯರ್ಪಿಸಿ ರಜಾ ವೇತನಕ್ಕೆ ಸಮನಾದ ನಗದೀಕರಣ ಸೌಲಭ್ಯ ಪಡೆಯುವ ಯೋಜನೆಯನ್ನು ದಿನಾಂಕ 01.01.2019 ರಿಂದ ಜಾರಿಗೊಳಿಸಿ ಈ ಕೆಳಕಂಡಂತೆ ನಿಯತಗೊಳಿಸಲಾಗಿದೆ.

| ಕ್ರಮ ಸಂಖ್ಯೆ | ಅಧಿಕಾರಿ / ನೌಕರರ ಸಮೂಹ | ಮುಂಚಿತವಾಗಿ ಒಂದು ತಿಂಗಳ ನೋಟಿಸ್ ನೀಡಿ 2019 ನೇ ಸಾಲಿನ ಅವಧಿಗೆ ನಗದೀಕರಣ ಸೌಲಭ್ಯ ಪಡೆಯುವ ಅವಧಿ |
|---|---|---|
| 1. | ಗ್ರೂಪ್ 'ಡಿ' ಸಮೂಹ | ಅವರ ಇಚ್ಛೆಯಂತೆ 2019ರ ಕ್ಯಾಲೆಂಡರ್ ವರ್ಷದ ಯಾವುದೇ ತಿಂಗಳಿನಲ್ಲಿ. |
| 2. | ಉಳಿದ ಸಮೂಹ (ಎ, ಬಿ, ಸಿ,) | ಅವರ ಇಚ್ಛೆಯಂತೆ ಎಪ್ರಿಲ್ 2019ರಿಂದ ಡಿಸೆಂಬರ್ 2019ರ ವರೆಗಿನ ಯಾವುದೇ ತಿಂಗಳಿನಲ್ಲಿ. |

2. ಮೇಲೆ ವಿಧಿಸಿದ ನಿಬಂಧನೆಯು ಏನೇ ಇದ್ದಾಗ್ಯೂ ಜನವರಿ 2019 ರಿಂದ ಮಾರ್ಚ್ 2019 ರಲ್ಲಿ ನಿವೃತ್ತಿ ಹೊಂದುವ ಎಲ್ಲಾ ಅರ್ಹ ನೌಕರರು/ ಅಧಿಕಾರಿಗಳು, ಅವರು ನಿವೃತ್ತಿ ಹೊಂದುವ ತಿಂಗಳಲ್ಲಿ ನಗದೀಕರಣ ಪ್ರಯೋಜನ ಪಡೆಯಲು ಅರ್ಹರಾಗಿರುತ್ತಾರೆ.

3. ಗೆಜಿಟೆಡ್ ಅಧಿಕಾರಿಗಳ ಸಂಬಂಧದಲ್ಲಿ 2019ನೇ ಸಾಲಿನ ಗಳಿಕೆ ರಜೆ ನಗದೀಕರಣ ಸೌಲಭ್ಯ ಮಂಜೂರಾತಿ ಉದ್ದೇಶಕ್ಕಾಗಿ ಮಾತ್ರ, ಹೆಚ್‌ಆರ್‌ಎಂಎಸ್ ನಲ್ಲಿ ಲಭ್ಯವಿರುವ ಅಧಿಕಾರಿಗಳ ಗಳಿಕೆ ರಜೆ ಲೆಕ್ಕಾಚಾರದ ಆಧಾರದ ಮೇಲೆ ನಗದೀಕರಣವನ್ನು ಮಂಜೂರು ಮಾಡಲು ಸಕ್ಷಮ ರಜೆ ಮಂಜೂರಾತಿ ಪ್ರಾಧಿಕಾರಿಗಳು ಕ್ರಮ ವಹಿಸತಕ್ಕದ್ದು ಮತ್ತು ಮಹಾಲೇಖಪಾಲರು ಲೆಕ್ಕಾಚಾರದ ಬಗ್ಗೆ ಯಾವುದೇ ವ್ಯತ್ಯಾಸವನ್ನು ತಿಳಿಸಿದಲ್ಲಿ ಅದನ್ನು ಸರಿಪಡಿಸುವ ಮತ್ತು ಅದರನ್ವಯದ ಆರ್ಥಿಕ ಸೌಲಭ್ಯಗಳಿಗೆ ಮಾತ್ರ ಅರ್ಹವಾಗುವ ಷರತ್ತಿಗೊಳಪಡಿಸಿ ಮಂಜೂರು ಮಾಡತಕ್ಕದು.

4. ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 118 ರಲ್ಲಿ ನಿಯಮಿಸಿರುವಂತಹ ಗಳಿಕೆ ರಜೆ ನಗದೀಕರಣ ನಿಯಂತ್ರಣಕ್ಕೆ ಸಂಬಂಧಿಸಿದ ಇತರೆ ಷರತ್ತುಗಳು ಅನ್ವಯವಾಗುತ್ತದೆ.

...ಪುಟ 2ಕ್ಕೆ

5. ಈ ಆದೇಶವು ಈಗಾಗಲೇ ಈ ಸೌಲಭ್ಯ ವಿಸ್ತರಣೆಯಾಗಿರುವ ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಸಂಸ್ಥೆಗಳ ನೌಕರರಿಗೂ ಅನ್ವಯಿಸುತ್ತದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

Suvarna B S.
**(ಬಿ.ಎಸ್.ಸುವರ್ಣ),**
**ಸರ್ಕಾರದ ಅಧೀನ ಕಾರ್ಯದರ್ಶಿ,**
**ಆರ್ಥಿಕ ಇಲಾಖೆ (ಸೇವೆಗಳು-1).**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಕಂದಾಯ, ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ). ಬೆಂಗಳೂರು
9. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
16. ಪ್ರಾಜೆಕ್ಟ್‌ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145-ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
17. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
18. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
19. ವಾರಪತ್ರ/ಶಾಖೆಯ ರಕ್ಷಾ ಕಡತ.

**[ಕ್ರಮ ಸಂಖ್ಯೆ:7 ರಿಂದ 16 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].**

**ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ WWW.finance.kar.nic.in. ವೀಕ್ಷಿಸಿ.**